ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಗ್ರಂಥಪಾಲಕರಿಗೆ ಕನಿಷ್ಠ ವೇತನ ಜಾರಿ ಮಾಡುವ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

66(392) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಗ್ರಂಥಾಲಯಗಳಲ್ಲಿ ಗ್ರಂಥಪಾಲಕರಾಗಿ ಸೇವೆ ಸಲ್ಲಿಸುತ್ತಿರುವ ನೌಕರರುಗಳಿಗೆ ಕನಿಷ್ಠ ವೇತನ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಗ್ರಂಥಾಲಯ ಇಲಾಖೆ ಮೇಲ್ವಿಚಾರಕರ ಕಾರ್ಯದ ಅವಧಿಯನ್ನು 4 ಗಂಟೆಗಳ ಅವಧಿಯಿಂದ 8 ಗಂಟೆಗಳ ಅವಧಿಗೆ ಬದಲಾಯಿಸುವ ವಿಷಯ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು;

(ಈ) ಸದರಿ ನೌಕರರನ್ನು ಕನಿಷ್ಠ ವೇತನದ ವ್ಯಾಪ್ತಿಗೆ ಒಳಪಡಿಸುವ ವಿಚಾರದಲ್ಲಿ ಯಾವುದೇ ಪ್ರಗತಿ ಕಾಣದೆ ಬಾಕಿ ಉಳಿದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಯಾವ ಕಾಲಮಿತಿಯಲ್ಲಿ ಈ ಕಡತಕ್ಕೆ ಅನುಮೋದನೆ ನೀಡಲಾಗುವುದು ? (ಸಂಪೂರ್ಣ ವಿವರ ನೀಡುವುದು)